**ಕರ್ನಾಟಕ ಸರ್ಕಾರ**

ಇ-ಕಛೇರಿ ಸಂ: ಇಡಿ/185/ಯುಬಿವಿ/2023

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 27.09.2023

**ಇಂದ**
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು.

**ಇವರಿಗೆ**
ಕುಲಸಚಿವರು,
ಬೆಂಗಳೂರು ವಿಶ್ವವಿದ್ಯಾಲಯ,
ಜ್ಞಾನಭಾರತಿ ಆವರಣ, ಬೆಂಗಳೂರು.

**ಮಾನ್ಯರೆ,**

**ವಿಷಯ**: ಬೆಂಗಳೂರು ವಿಶ್ವವಿದ್ಯಾಲಯದ ವ್ಯಾಪ್ತಿಗೊಳಪಡುವ **ಐ.ಜೆಡ್.ಇ.ಇ. ಕಾಲೇಜ್ ಆಫ್ ಮ್ಯಾನೇಜ್‌ಮೆಂಟ್ ಅಂಡ್ ಇನ್ವಾಮೆರ್ಂಟಷನ್ ಸೈನ್ಸ್** ಕಾಲೇಜಿನ ಹೆಸರು, ಸ್ಥಳ ಬದಲಾವಣೆ ಮಾಡಲು ಹಾಗೂ 2023-2024 ನೇ ಶೈಕ್ಷಣಿಕ ಸಾಲಿನಿಂದ ಹೊಸ ಕೋರ್ಸನ್ನು ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ.

**ಉಲ್ಲೇಖ**:-
1. ಸರ್ಕಾರದ ಆದೇಶ ಸಂಖ್ಯೆ: ಇಡಿ 29 ಯುಎನ್‌ಇ 2021, ದಿನಾಂಕ:12.02.2021, ದಿನಾಂಕ: 16.02.2021.
2. ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ/384/ಯುಎನ್‌ಇ/2020, ದಿನಾಂಕ: 18.02.2022.
3. ತಮ್ಮ ಪತ್ರ ಸಂಖ್ಯೆ: ಎಸಿಎ-3:ಎ3: ಹೊಕೋಪ್ರ:23: 2023-2024, ದಿನಾಂಕ: 15.07.2023.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರಗಳ ಕಡೆಗೆ ತಮ್ಮ ಗಮನ ಸೆಳೆಯಲಾಗಿದೆ. ***ಐ.ಜೆಡ್.ಇ.ಇ. ಕಾಲೇಜ್ ಆಫ್ ಮ್ಯಾನೇಜ್‌ಮೆಂಟ್ ಅಂಡ್ ಇನ್ವಾಮೆರ್ಂಟಷನ್ ಸೈನ್ಸ್ ಕಾಲೇಜು ಪ್ರಸ್ತುತ ನಂ. 39, ಕೋನಪ್ಪನ ಅಗ್ರಹಾರ, ಎಲೆಕ್ಟ್ರಾನಿಕ್ ಸಿಟಿ, ವಿಭಾಗ-2, ಬೇಗೂರು ಹೋಬಳಿ, ಬೆಂಗಳೂರು - 560 100*** ಇಲ್ಲಿ ಸ್ಥಿತವಾಗಿದ್ದು, 2023-2024ನೇ ಸಾಲಿನಿಂದ "**ಪ್ಲಾಟ್ ನಂ.325, ಪಾರ್ಟ್-ಎ, ಬೊಮ್ಮಸಂದ್ರ - ಜಿಗಣಿ ಲಿಂಕ್ ರಸ್ತೆ, ಜಿಗಣಿ ಇಂಡಸ್ಟ್ರಿಯಲ್ ಏರಿಯಾ, ಜಿಗಣಿ ಅಂಚೆ, ಬೆಂಗಳೂರು - 560 105**" ಇಲ್ಲಿಗೆ ಸ್ಥಳಾಂತರಿಸಲು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ 59(5) ರಡಿ ಅನುಮತಿ ಕೋರಿ ಹಾಗೂ *ಹೊಸದಾಗಿ* ***ಎಂ.ಬಿ.ಎ. ಕೋರ್ಸನ್ನು 180 (ನೂರ ಎಂಭತ್ತು)*** *ವಿದ್ಯಾರ್ಥಿ ಪ್ರಮಾಣದೊಂದಿಗೆ* ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ (11) ರಡಿ ಅನುಮತಿ ಕೋರಿ, ಕಾಲೇಜಿನ ಅರ್ಜಿ, ಸ್ಥಳೀಯ ವಿಚಾರಣೆ ಸಮಿತಿಯ ವರದಿ ಹಾಗೂ ಸಿಂಡಿಕೇಟ್ / ವಿದ್ಯಾವಿಷಯಕ ಪರಿಷತ್ತುಗಳ ಗೊತ್ತುವಳಿಗಳ ದಾಖಲೆಗಳೊಂದಿಗೆ ಉಲ್ಲೇಖ (3) ರ ತಮ್ಮ ಪತ್ರದ ಮೂಲಕ, UUCMS ಆನ್‌ಲೈನ್ ತಂತ್ರಾಂಶದಲ್ಲಿ ಸಲ್ಲಿಸಿರುವ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದೆ.

ಸ್ಥಳೀಯ ವಿಚಾರಣೆ ಸಮಿತಿಯ ಅವಲೋಕನೆ ಮತ್ತು ತೀರ್ಮಾನಗಳನ್ನು ಪರಿಗಣಿಸಿದ ತರುವಾಯ ಬೆಂಗಳೂರು ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ತು ಹಾಗೂ ಸಿಂಡಿಕೇಟ್

ಪ್ರಾಧಿಕಾರಗಳು ಅಂಗೀಕರಿಸಿದ ಗೊತ್ತುವಳಿಗಳನ್ನು ಅನುಸರಿಸಿ ಹಾಗೂ ಶೈಕ್ಷಣಿಕ/ಭೌತಿಕ ಹಾಗೂ ನಾಗರೀಕ ಮೂಲಸೌಕರ್ಯಗಳ ಲಭ್ಯತೆ ಹಾಗೂ ಗುಣಮಟ್ಟದ ಕಾರ್ಯನಿರ್ವಹಣೆಯ ಖಚಿತತೆಗಾಗಿ ಉಲ್ಲೇಖ(1)ರ ಸರ್ಕಾರದ ಆದೇಶದಲ್ಲಿ ನಿಗದಿಪಡಿಸಲಾದ ನಿಯತಾಂಕಗಳ ಹಾಗೂ ಸೂಚ್ಯಾಂಕಗಳ ಪೂರೈಕೆಯನ್ನು ದೃಢಪಡಿಸಿಕೊಂಡು ಹಾಗೂ ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 384 ಯುಎನ್ಇ 2020, ದಿನಾಂಕ: 18.02.2022ರನ್ವಯ ಅಗತ್ಯ ಪ್ರಮಾಣದ ಜಮೀನಿನ ದಾಖಲಾತಿಗಳನ್ನು ದೃಢಪಡಿಸಿಕೊಂಡು ಪ್ರಸ್ತಾವನೆಯನ್ನು ಪರಿಗಣಿಸಲಾಗಿದೆ.

## ಭಾಗ - 1

ಆದುದರಿಂದ, ***ಐ.ಜೆಡ್.ಇ.ಇ. ಬಿಸಿನೆಸ್ ಸ್ಕೂಲ್ ಆಫ್ ಮ್ಯಾನೇಜ್‌ಮೆಂಟ್ ಅಂಡ್ ಇನ್ಫಾರ್ಮೇಷನ್ ಸೈನ್ಸ್, ಫ್ಲಾಟ್ ನಂ.325, ಪಾರ್ಟ್-ಎ, ಬೊಮ್ಮಸಂದ್ರ-ಜಿಗಣಿ ಲಿಂಕ್ ರಸ್ತೆ, ಜಿಗಣಿ ಇಂಡಸ್ಟ್ರಿಯಲ್ ಏರಿಯಾ, ಜಿಗಣಿ ಅಂಚೆ, ಬೆಂಗಳೂರು*** **- 560 105** ಇಲ್ಲಿ 2023-24ನೇ ಸಾಲಿನಿಂದ ಹೊಸ ಕೋರ್ಸುಗಳನ್ನು ಆರಂಭಿಸಲು ಸಂಯೋಜನೆ ನೀಡುವ ಕುರಿತು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ 59(11) ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ ಶಿಫಾರಸ್ಸು ಮಾಡಲಾಗಿದೆ ಎಂದು ತಿಳಿಸಲು ನಾನು ನಿರ್ದೇಶಿತನಾಗಿದ್ದೇನೆ.

| ಕೋರ್ಸು | ವಿಷಯ ಸಮೂಹ | ವಿದ್ಯಾರ್ಥಿ ಪ್ರಮಾಣ |
|---|---|---|
| *ಎಂ.ಬಿ.ಎ.* | ವಿ.ವಿ. ಪರಿನಿಯಮಾವಳಿಗಳು | *180 (ನೂರ ಎಂಭತ್ತು)* |

1. ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನರಹಿತ ಕೋರ್ಸೆಂದು ಪರಿಗಣಿಸತಕ್ಕದ್ದು;
2. ಮೇಲ್ಕಂಡ ಕಾಲೇಜು ವಿಶ್ವವಿದ್ಯಾಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು;
3. ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ;
4. ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ,
5. ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;
6. ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು
7. ಕಾಲೇಜು/ಆಡಳಿತ ಮಂಡಳಿಯು ಶೇ.50 ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗದಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗದಿಪಡಿಸುವ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು, ವಿಶ್ವವಿದ್ಯಾಲಯವು ನಿಗದಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ;
8. ದಿನಾಂಕ: 13-8-1997 ರಂದು ವಿಶಾಖ v/s ರಾಜಸ್ಥಾನ ಸರ್ಕಾರ ಮೊಕದ್ದಮ್ಮೆಯಲ್ಲಿ ಸುಪ್ರೀಂ ಕೋರ್ಟು ನೀಡಿರುವ ತೀರ್ಪಿನನುಸಾರ ಯಾವುದೇ ವ್ಯಕ್ತಿ/ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡಿದಲ್ಲಿ ಅದು ಸಂಜ್ಞೇಯ ಅಪರಾಧ (Cognizable Offence) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು; ಮತ್ತು ಆ ವ್ಯಕ್ತಿ/ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು; ಮುಂದುವರೆದು, ಕಾಲೇಜು/ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ; ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು;
9. ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ಆಡಳಿತ ಮಂಡಳಿಯು ವಿದ್ಯಾರ್ಥಿ/ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು;

10 ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯ ಅಂಕಪಟ್ಟಿ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾಲಯವು ಅನುಮೋದಿಸುವವರೆಗೆ ಅಥವಾ 6 ತಿಂಗಳ ಅವಧಿಗೆ ಮೀರಿ, ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ;

11 ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ;

12 ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

13 ಶೈಕ್ಷಣಿ/ಭೌತಿಕ ಹಾಗೂ ನಾಗರೀಕ ಮೂಲ ಸೌಕರ್ಯಗಳ ಲಭ್ಯತೆ ಹಾಗೂ ಗುಣ ಮಟ್ಟದ ಕಾರ್ಯನಿರ್ವಹಣೆಯ ಖಚಿತತೆಗಾಗಿ ನಿಗದಿ ಪಡಿಸಲಾದ ಸೂಚ್ಯಾಂಕಗಳ ಪೈಕಿ ಪಾಲನೆಯಾಗದ ಸೂಚ್ಯಾಂಕಗಳನ್ನು 6 ತಿಂಗಳ ಒಳಗಾಗಿ ಪೂರೈಸತಕ್ಕದ್ದು.

14 ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000 ಪ್ರಕರಣ 59 ರಲ್ಲಿನ ಮಾನದಂಡಗಳು ಹಾಗೂ ಸಂಯೋಜನೆಗೆ ಸಂಬಂಧಿಸಿದಂತೆ, ಸರ್ಕಾರದಿಂದ ಹೊರಡಿಸಿರುವ ಆದೇಶ ಮತ್ತು ಸುತ್ತೋಲೆಗಳನ್ನು ಸಂಬಂಧಿಸಿದ ಕಾಲೇಜು ಪಾಲಿಸಿವೆಯೇ ಎಂಬುದರ ಕುರಿತಾಗಿ ವಿಶ್ವವಿದ್ಯಾಲಯವು ಖಚಿತಪಡಿಸಿಕೊಳ್ಳತಕ್ಕದ್ದು. ತಪ್ಪಿದಲ್ಲಿ ವಿಶ್ವವಿದ್ಯಾಲಯವು ಸಂಪೂರ್ಣ ಜವಾಬ್ದಾರಿಯಾಗಿರುತ್ತದೆ. ಸರ್ಕಾರದ ಆದೇಶ ಸಂಖ್ಯೆ: ಇಡಿ 29 ಯುಎನ್ಇ 2021, ದಿನಾಂಕ: 12.02.2021, ಇಡಿ 218 ಯುಎನ್ಇ 2020, ದಿನಾಂಕ: 24.08.2022 ರಲ್ಲಿನ ಷರತ್ತುಗಳನ್ನು ಆರು ತಿಂಗಳ ಒಳಗಾಗಿ ಪೂರೈಸುವ ಷರತ್ತಿಗೊಳಪಟ್ಟಿದೆ.

## ಭಾಗ - 2

***39, ಕೋನಪ್ಪನ ಅಗ್ರಹಾರ, ಎಲೆಕ್ಟ್ರಾನಿಕ್ ಸಿಟಿ, ವಿಭಾಗ-2, ಬೇಗೂರು ಹೋಬಳಿ, ಬೆಂಗಳೂರು - 560 100*** ಇಲ್ಲಿ ಸ್ಥಿತವಾಗಿರುವ **ಐ.ಜೆಡ್.ಇ.ಇ. ಬಿಸಿನೆಸ್ ಸ್ಕೂಲ್ ಆಫ್ ಮ್ಯಾನೇಜ್‌ಮೆಂಟ್ ಅಂಡ್ ಇನ್ಫಾರ್ಮೇಷನ್ ಸೈನ್ಸ್** ಕಾಲೇಜನ್ನು **"ಫ್ಲಾಟ್ ನಂ.325, ಪಾರ್ಟ್-ಎ, ಬೊಮ್ಮಸಂದ್ರ - ಜಿಗಣಿ ಲಿಂಕ್ ರಸ್ತೆ, ಜಿಗಣಿ ಇಂಡಸ್ಟ್ರಿಯಲ್ ಏರಿಯಾ, ಜಿಗಣಿ ಅಂಚೆ, ಬೆಂಗಳೂರು - 560 105"** ವಿಳಾಸಕ್ಕೆ ಸ್ಥಳಾಂತರಿಸಲು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000 ರ ಪ್ರಕರಣ 59(5)ರನ್ವಯ ಅನುಮತಿಸಲಾಗಿದೆ ಎಂದು ತಿಳಿಸಲು ನಿರ್ದೇಶಿತನಾಗಿದ್ದೇನೆ.

1 ಸ್ಥಳ ಬದಲಾವಣೆಯಿಂದ ವಿದ್ಯಾರ್ಥಿಗಳೂ ಮತ್ತು ಪೋಷಕರಿಂದ ಯಾವುದೇ ದೂರುಗಳು ಬರದಂತೆ ಕಾಲೇಜು ಮತ್ತು ಸಂಬಂಧಪಟ್ಟ ವಿಶ್ವವಿದ್ಯಾಲಯ ಬಗೆಹರಿಸಿಕೊಳ್ಳತಕ್ಕದ್ದು;

2 ಈಗಾಗಲೇ ಕಾಲೇಜಿನಲ್ಲಿ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳಿಗೆ ಸ್ಥಳ ಬದಲಾವಣೆಯಿಂದ ಯಾವುದೇ ತೊಂದರೆಯಾಗದಂತೆ ಖಚಿತಪಡಿಸಿಕೊಳ್ಳತಕ್ಕದ್ದು; ಯಾವುದೇ ವಿದ್ಯಾರ್ಥಿಗಳು ಬಯಸಿದಲ್ಲಿ ಅವರನ್ನು ಹತ್ತಿರದ ಕಾಲೇಜುಗಳಿಗೆ ವರ್ಗಾಯಿಸತಕ್ಕದ್ದು; ಅವರ ಶೈಕ್ಷಣಿಕ ದಾಖಲೆಗಳನ್ನು ಸಹ ಸುರಕ್ಷಿತವಾಗಿ ವರ್ಗಾಯಿಸತಕ್ಕದ್ದು

3 ಸ್ಥಳ ಬದಲಾವಣೆ ಕಾರಣಕ್ಕಾಗಿ ವಿದ್ಯಾರ್ಥಿಗಳಿಂದ ಹಾಗೂ ಪೋಷಕರಿಂದ ಯಾವುದೇ ದೂರುಗಳು ಬರದಂತೆ ಕಾಲೇಜು ಹಾಗೂ ವಿಶ್ವವಿದ್ಯಾಲಯ ಕ್ರಮವಹಿಸತಕ್ಕದ್ದು; ಕಾಲೇಜಿಗೆ ಸಂಬಂಧಿಸಿದ ಎಲ್ಲಾ ದಾಖಲೆಗಳನ್ನು ಸುರಕ್ಷಿತವಾಗಿ ಹೊಸ ಸ್ಥಳಕ್ಕೆ ವರ್ಗಾಯಿಸತಕ್ಕದ್ದು

4 ಈ ಕಾಲೇಜಿನ ಸ್ಥಳ ಬದಲಾವಣೆಯಿಂದ ಸಂಯೋಜನೆ/ಮುಂದುವರಿಕೆ ಸಂಯೋಜನೆಗೆ ಪೂರಕವಾಗಿ ವಿಧಿಸಲಾಗಿರುವ ಷರತ್ತುಗಳು ಯಥಾವತ್ತಾಗಿ ಮುಂದುವರೆಯುತ್ತವೆ. ಮತ್ತು ಇವುಗಳಲ್ಲಿ ಯಾವುದೇ ಬದಲಾವಣೆಗಳು ಇರುವುದಿಲ್ಲ;

5 ಒಂದು ಪಕ್ಷ ಕಾಲೇಜಿನ ಆಡಳಿತ ಮಂಡಳಿಯವರು ಈ ಷರತ್ತುಗಳನ್ನು ಅನುಸರಿಸದಿದ್ದಲ್ಲಿ ಮುಂಬರುವ ಶೈಕ್ಷಣಿಕ ಸಾಲಿನಲ್ಲಿ ಕಾಲೇಜಿಗೆ ವಿದ್ಯಾರ್ಥಿ ಪ್ರವೇಶವನ್ನು ಸಂಬಂಧಿಸಿದ ವಿಶ್ವವಿದ್ಯಾಲಯವು ಅಂಗೀಕರಿಸತಕ್ಕದ್ದಲ್ಲ;

6 6 ತಿಂಗಳುಗಳ ಒಳಗಾಗಿ ವಿದ್ಯಾರ್ಥಿ ತಲಾವಾರು ತರಗತಿ ಹಾಗೂ ಪ್ರಯೋಗಾಲಯ ಪ್ರದೇಶ ಲಭ್ಯತೆಯ ಹಾಗೂ ಯುಜಿಸಿ ವಿನಿಮಯಗಳನ್ವಯ ಅಗತ್ಯವಾಗುವ ಮೂಲಧನ ನಿರ್ವಹಣೆ ಹಾಗೂ ಮುಚ್ಚಳಿಕೆ ಕಾರ್ಯಗತಗೊಳಿಸುವಿಕೆ ನಿಯತಾಂಕಗಳನ್ನು ಪೂರೈಸತಕ್ಕದ್ದು. ತಪ್ಪಿದಲ್ಲಿ, ಕಾಲೇಜಿನ ಸ್ಥಳ ಬದಲಾವಣೆಗೆ ನೀಡಲಾಗಿರುವ ಅನುಮತಿಯು ಸ್ವಯಂಚಾಲಿತವಾಗಿ ರದ್ದುಗೊಳ್ಳುತ್ತವೆ.

6 ತಿಂಗಳುಗಳ ಒಳಗಾಗಿ ಪಿಹೆಚ್‌ಡಿ ಹಾಗೂ NET/SLET ಅರ್ಹತೆಯ ಬೋಧಕರನ್ನು ನೇಮಿಸಿಕೊಳ್ಳತಕ್ಕದ್ದು. ಹಾಗೂ ಅರ್ಹ ಬೋಧಕರಿಗೆ ಯುಜಿಸಿ ವೇತನ ಶ್ರೇಣಿಯಲ್ಲಿ ವೇತನ ಪಾವತಿಸತಕ್ಕದ್ದು. ನ್ಯಾಕ್ ಮಾನ್ಯತೆಯನ್ನು ಇದೇ ಶೈಕ್ಷಣಿಕ ವರ್ಷದಲ್ಲಿ ಪಡೆಯತಕ್ಕದ್ದು. ಭದ್ರತಾ
7 ಸಿಬ್ಬಂದಿಯನ್ನು ಮಲಪಡಿಸುವುದು, ಬ್ಯುಸಿನೆಸ್ ಲ್ಯಾಬ್ ಸ್ಥಾಪಿಸುವುದು, ಭಾಷಾ ಪ್ರಯೋಗಾಲಯಕ್ಕೆ ನಾವೀನ್ಯ ತಂತ್ರಾಂಶಗಳನ್ನು ಖರೀದಿಸುವುದು ಸೇರಿದಂತೆ ಸ್ಥಳೀಯ ವಿಚಾರಣೆ ಸಮಿತಿಯ ಎಲ್ಲಾ ಷರತ್ತುಗಳನ್ನು 3 ತಿಂಗಳ ಒಳಗಾಗಿ ಪೂರೈಸತಕ್ಕದ್ದು. ತಪ್ಪಿದಲ್ಲಿ 2023-24ನೇ ಸಾಲಿನಿಂದ ಕಾಲೇಜಿನ ಸಂಯೋಜನೆಯನ್ನು ರದ್ದುಪಡಿಸಲು ಬೆಂಗಳೂರು ವಿಶ್ವವಿದ್ಯಾಲಯಕ್ಕೆ ಸೂಚನೆ ನೀಡಲಾಗಿದೆ.

ಬೆಂಗಳೂರು ವಿಶ್ವವಿದ್ಯಾಲಯದ ಸ್ಥಳೀಯ ವಿಚಾರಣೆ ಸಮಿತಿಯ ವರದಿ ಹಾಗೂ ಶೈಕ್ಷಣಿಕ ಪರಿಷತ್ ಮತ್ತು ಸಿಂಡಿಕೇಟ್‌ನ ನಿರ್ಣಯಗಳನ್ನು ಅನುಸರಿಸಿ ಉಲ್ಲೇಖಿತ ಪತ್ರದನ್ವಯ ಸಲ್ಲಿಸಲಾದ ಪ್ರಸ್ತಾವನೆಯನ್ನು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000 ರ ಪ್ರಕರಣ 65ರ ಉಪಬಂಧಗಳನುಸಾರ ಸಮಗ್ರವಾಗಿ ಸಂವೀಕ್ಷಿಸಿ, ಪರಿಗಣಿಸಲಾಗಿದೆ.

***ಐ.ಜೆಡ್.ಇ.ಇ. ಬಿಸಿನೆಸ್ ಸ್ಕೂಲ್ ಆಫ್ ಮ್ಯಾನೇಜ್‌ಮೆಂಟ್ ಅಂಡ್ ಇನ್ಫಾರ್ಮೇಷನ್ ಸೈನ್ಸ್, ಫ್ಲಾಟ್ ನಂ.325, ಪಾರ್ಟ್-ಎ, ಬೊಮ್ಮಸಂದ್ರ-ಜಿಗಣಿ ಲಿಂಕ್ ರಸ್ತೆ, ಜಿಗಣಿ ಇಂಡಸ್ಟ್ರಿಯಲ್ ಏರಿಯಾ, ಜಿಗಣಿ ಅಂಚೆ, ಬೆಂಗಳೂರು - 560 105*** ಇಲ್ಲಿ 2023-2024ನೇ ಸಾಲಿನಿಂದ ಹೊಸದಾಗಿ **ಎಂ.ಬಿ.ಎ.** ಕೋರ್ಸನ್ನು **180** ವಿದ್ಯಾರ್ಥಿ ಪ್ರಮಾಣದೊಂದಿಗೆ ಆರಂಭಿಸಲು ಹಾಗೂ ಸ್ಥಳ ಬದಲಾವಣೆಗೆ ನೀಡಲಾಗಿರುವ ಸರ್ಕಾರದ ಪೂರ್ವೋಕ್ತ ಅನುಮತಿಯು ಈ ಕೆಳಕಂಡ ಷರತ್ತುಗಳ ಪಾಲನೆಗೆ ಒಳಪಟ್ಟಿರುತ್ತದೆ:-

**ತಮ್ಮ ನಂಬುಗೆಯ,**

**(ನಂದಕುಮಾರ್ ಬಿ.)**
ಸರ್ಕಾರದ ಅಧೀನ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ(ವಿಶ್ವವಿದ್ಯಾಲಯಗಳು-2).

**ಪ್ರತಿ:**

1. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು-560 001.
2. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
3.ಪ್ರಾಂಶುಪಾಲರು, ***ಐ.ಜೆಡ್.ಇ.ಇ. ಬಿಸಿನೆಸ್ ಸ್ಕೂಲ್ ಆಫ್ ಮ್ಯಾನೇಜ್‌ಮೆಂಟ್ ಅಂಡ್ ಇನ್ಫಾರ್ಮೇಷನ್ ಸೈನ್ಸ್, ಫ್ಲಾಟ್ ನಂ.325, ಪಾರ್ಟ್-ಎ, ಬೊಮ್ಮಸಂದ್ರ-ಜಿಗಣಿ ಲಿಂಕ್ ರಸ್ತೆ, ಜಿಗಣಿ ಇಂಡಸ್ಟ್ರಿಯಲ್ ಏರಿಯಾ, ಜಿಗಣಿ ಅಂಚೆ, ಬೆಂಗಳೂರು - 560 105*** 4. ಇ-ಸಮನ್ವಯಾಧಿಕಾರಿ, ಉನ್ನತ ಶಿಕ್ಷಣ ಇಲಾಖೆ ಇವರಿಗೆ (ಉನ್ನತ ಶಿಕ್ಷಣ ಇಲಾಖೆಯ ಜಾಲತಾಣದಲ್ಲಿ ಪ್ರಕಟಿಸಲು)